ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	278
ಸದಸ್ಯರ ಹೆಸರು	:	ಡಾ: ಚಂದ್ರಶೇಖರ್ ಬಿ ಪಾಟೀಲ್ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ	:	21-09-2020
ಉತ್ತರಿಸುವ ಸಚಿವರು	:	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
ಅ)	ದ್ವಿತೀಯ ಪಿ.ಯು.ಸಿ. ಪರೀಕ್ಷೆಗಳ ಎಲ್ಲಾ ವಿಷಯಗಳ ಉತ್ತರ ಪತ್ರಿಕೆಗಳ ಮೌಲ್ಯಮಾಪನವನ್ನು ವಿಭಾಗೀಯ ಮಟ್ಟದಲ್ಲಿ ನಡೆಸಲು ಸಾಧ್ಯವಿಲ್ಲವೆ?	ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಮೌಲ್ಯಮಾಪನವನ್ನು ವಿಭಾಗೀಯ ಮತ್ತು ಜಿಲ್ಲಾ ಹಂತಗಳಲ್ಲಿಯೂ ನಡೆಸಲಾಗಿದೆ. ಪ್ರಸ್ತುತ ವಾರ್ಷಿಕ ಪರೀಕ್ಷೆಯ ವಿಜ್ಞಾನ ವಿಭಾಗದ ವಿಷಯಗಳ ಮೌಲ್ಯಮಾಪನವನ್ನು ಕೇಂದ್ರಿಕೃತವಾಗಿ ಬೆಂಗಳೂರಿನಲ್ಲಿ ನಡೆಸಲಾಗುತ್ತಿದ್ದು, ಬೇರೆ ಎಲ್ಲಾ ವಿಷಯಗಳ ಉತ್ತರ ಪತ್ರಿಕೆಗಳ ಮೌಲ್ಯಮಾಪನವನ್ನು ವಿಭಾಗೀಯ ಮತ್ತು ಜಿಲ್ಲಾ ಮಟ್ಟದಲ್ಲಿಯೂ ನಡೆಸಲಾಗುತ್ತಿದೆ. ಈ ವರ್ಷದಲ್ಲಿ ಕೋವಿಡ್ ಹಿನ್ನಲೆಯಲ್ಲಿ ಇಂಗ್ಲೀಷ್ ಭಾಷಾ ಉತ್ತರ ಪತ್ರಿಕೆಗಳ ಮೌಲ್ಯಮಾಪನವನ್ನು 20 ಜಿಲ್ಲಾ ಕೇಂದ್ರಗಳಲ್ಲಿ ನಡೆಸಲಾಯಿತು. ಸಾಗಾಣಿಕೆ ಮತ್ತು ಉತ್ತರಪತ್ರಿಕೆಗಳ ಸುರಕ್ಷತೆಯ ದೃಷ್ಟಿಯಿಂದ ಮತ್ತು ಮೌಲ್ಯಮಾಪಕರ ಲಭ್ಯತೆಯ ಆಧಾರದಲ್ಲಿ ವಿಜ್ಞಾನ ವಿಷಯಗಳ ಮೌಲ್ಯಮಾಪನವನ್ನು ಬೆಂಗಳೂರಿನಲ್ಲಿ ಮತ್ತು ವಿಭಾಗೀಯ ಮಟ್ಟದಲ್ಲಿ ನಡೆಸಲಾಗಿದೆ.

ಸಂಖ್ಯೆ: ಇಪಿ 118 ಡಿಜಿಡಬ್ಲ್ಯೂ 2020

(ಎಸ್.ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.